# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 604 |
| ಉತ್ತರಿಸಬೇಕಾದ ದಿನಾಂಕ | : | 17.12.2021 |
| ಸದಸ್ಯರ ಹೆಸರು | : | ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1 | ಕರಾವಳಿ ಅವಿಭಾಜಿತ ದಕ್ಷಿಣ ಕನ್ನಡ ಜಿಲ್ಲೆಯ ಕಂಬಳ ಕ್ರೀಡಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ನೀಡುವ ಪುರಸ್ಕಾರ /ರಾಜ್ಯ ಪ್ರಶಸ್ತಿಗೆ ಅರ್ಹ ವ್ಯಕಿಗಳನ್ನು ಆಯ್ಕೆ ಮಾಡುವ ನಿಟ್ಟಿನಲ್ಲಿ ಸಲಹಾ ಸಮಿತಿಯ ಸದಸ್ಯರನ್ನು ನೇಮಕಗೊಳಿಸುವ ಮಾನದಂಡಗಳೇನು ; ಮತ್ತು ಸದಸ್ಯರ ಅಧಿಕಾರ ಕಾಲಾವಧಿ ಎಷ್ಟು: ಪುನರಾಯ್ಕೆಗೆ ಅವಕಾಶವಿದೆಯೇ: ಇದ್ದಲ್ಲಿ, ಎಷ್ಟು ಬಾರಿ ಪುನರಾಯ್ಕೆಯಾಗಬಹುದು (ಸಂಪೂರ್ಣ ವಿವರ ಒದಗಿಸುವುದು) | ಕಂಬಳ ಕ್ರೀಡಾ ಕ್ಷೇತ್ರಕ್ಕೆ ಸೀಮಿತವಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಯಾವುದೇ ಪುರಸ್ಕಾರ/ ರಾಜ್ಯ ಪ್ರಶಸ್ತಿ ನೀಡಲಾಗುತ್ತಿಲ್ಲ ಹಾಗೂ ಯಾವುದೇ ಸಲಹಾ ಸಮಿತಿಯನ್ನು ರಚಿಸಿರುವುದಿಲ್ಲ.<br><br>ಕರ್ನಾಟಕ ಸರ್ಕಾರವು ರಾಜ್ಯದ ಗ್ರಾಮೀಣ ಮತ್ತು ಜಾನಪದ ಕ್ರೀಡೆಗಳಾದ ಕಂಬಳ, ಕುಸ್ತಿ, ಆಟ್ಯಾ-ಪಾಟ್ಯಾ ಇತ್ಯಾದಿ ಕ್ರೀಡೆಗಳು ಮತ್ತು ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿಯನ್ನು ನೀಡುತ್ತಿದ್ದು, ಸದರಿ ಕ್ರೀಡಾ ಪ್ರಶಸ್ತಿಗೆ ಕ್ರೀಡಾಪಟುಗಳನ್ನು ಆಯ್ಕೆ ಮಾಡುವ ಸಂಬಂಧ ಗ್ರಾಮೀಣ ಮತ್ತು ಜಾನಪದ ಕ್ರೀಡೆಗಳಲ್ಲಿ ಪರಿಣಿತಿ ಹೊಂದಿರುವವರನ್ನು ಒಳಗೊಂಡಂತೆ ಪರಿಶೀಲನಾ ಸಮಿತಿ ಮತ್ತು ಆಯ್ಕೆ ಸಮಿತಿಗಳನ್ನು ರಚಿಸಿ ದಿನಾಂಕ: 17.05.2021ರಲ್ಲಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ.<br><br>ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿಗೆ ಕ್ರೀಡಾಪಟುಗಳನ್ನು ಆಯ್ಕೆ ಮಾಡುವ ಸಂಬಂಧ ಪರಿಶೀಲನಾ ಸಮಿತಿ ಮತ್ತು ಆಯ್ಕೆ ಸಮಿತಿ ಸದಸ್ಯರನ್ನು ಎರಡು ವರ್ಷಗಳ ಕಾಲಾವಧಿಗೆ ಸರ್ಕಾರವು ನೇಮಿಸಿರುತ್ತದೆ. ಸದರಿ ಸಮಿತಿಗಳಿಗೆ ಸದಸ್ಯರ ನೇಮಕವು ಸರ್ಕಾರದ ವಿವೇಚನೆಗೆ ಒಳಪಟ್ಟಿದ್ದು, ಪುನರಾಯ್ಕೆಗೆ ಯಾವುದೇ ನಿರ್ಬಂಧ ಇರುವುದಿಲ್ಲ. |
| 2 | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಂಬಳ ಸಲಹಾ ಸಮಿತಿಯ ಸದಸ್ಯರ ವಿವರ ಅಧಿಕಾರಾವಧಿ ಸೇರಿದಂತೆ ಸಂಪೂರ್ಣ ಮಾಹಿತಿ ಒದಗಿಸುವುದು. | ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

**ವೈಎಸ್‌ಡಿ/ಇಬಿಬಿ/202/2021**

**(ಡಾ. ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.